# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 615 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಸಿ.ಎನ್.ಮಂಜೇಗೌಡ |
| ಉತ್ತರಿಸುವ ದಿನಾಂಕ | : | 13-12-2024 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಮೈಸೂರು ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳ ಸಲುವಾಗಿ ಇರುವ ವಸತಿ ನಿಲಯಗಳ ಸಂಖ್ಯೆ ಎಷ್ಟು; (ವಿಧಾನಸಭಾವಾರು ಮಾಹಿತಿ ಒದಗಿಸುವುದು)</td><td>ಮೈಸೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗಾಗಿ ಒಟ್ಟು 85 ಡಾ||ಬಿ.ಅರ್.ಅಂಬೇಡ್ಕರ್ ಸರ್ಕಾರಿ ವಿದ್ಯಾರ್ಥಿ ನಿಲಯಗಳನ್ನು ನಡೆಸಲಾಗುತ್ತಿದೆ. ವಿಧಾನಸಭಾ ಕ್ಷೇತ್ರುವಾರು ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ.</th><th>ವಿಧಾನಸಭಾ ಕ್ಷೇತ್ರ</th><th>ವಿದ್ಯಾರ್ಥಿ ನಿಲಯಗಳ ಸಂಖ್ಯೆ</th></tr>
<tr><td>1.</td><td>ಹೆಚ್.ಡಿ.ಕೋಟೆ</td><td>10</td></tr>
<tr><td>2.</td><td>ಕೆ.ಆರ್.ನಗರ</td><td>07</td></tr>
<tr><td>3.</td><td>ತಿ.ನರಸೀಪುರ</td><td>07</td></tr>
<tr><td>4.</td><td>ಹುಣಸೂರು</td><td>10</td></tr>
<tr><td>5.</td><td>ಪಿರಿಯಾಪಟ್ಟಣ</td><td>05</td></tr>
<tr><td>6.</td><td>ನಂಜನಗೂಡು</td><td>11</td></tr>
<tr><td>7.</td><td>ಚಾಮರಾಜ</td><td>05</td></tr>
<tr><td>8.</td><td>ನರಸಿಂಹರಾಜ</td><td>02</td></tr>
<tr><td>9.</td><td>ಕೃಷ್ಣರಾಜ</td><td>06</td></tr>
<tr><td>10.</td><td>ವರುಣಾ</td><td>06</td></tr>
<tr><td>11.</td><td>ಚಾಮುಂಡೇಶ್ವರಿ</td><td>16</td></tr>
<tr><td></td><td>ಒಟ್ಟು</td><td>85</td></tr>
</table></td></tr>
<tr><td>ಆ)</td><td>ಸದರಿ ವಸತಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;</td><td>ಮೇಲ್ಕಂಡಂತೆ ನಡೆಸಲಾಗುತ್ತಿರುವ ವಿದ್ಯಾರ್ಥಿ ನಿಲಯಗಳಲ್ಲಿ 2024-25ನೇ ಸಾಲಿಗೆ 8462 ವಿದ್ಯಾರ್ಥಿಗಳು ದಾಖಲಾಗಿರುತ್ತಾರೆ.</td></tr>
<tr><td>ಇ)</td><td>ಸ್ವಂತ ಕಟ್ಟಡವನ್ನು ಹೊಂದಿರುವಂತಹ ವಸತಿ ನಿಲಯಗಳ ಸಂಖ್ಯೆ ಎಷ್ಟು; ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು;</td><td>ಸದರಿ 85 ವಿದ್ಯಾರ್ಥಿ ನಿಲಯಗಳ ಪೈಕಿ, 70 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡಗಳಲ್ಲಿ ಹಾಗೂ 15 ವಿದ್ಯಾರ್ಥಿ ನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ.</td></tr>
<tr><td>ಈ)</td><td>2024-25ನೇ ಸಾಲಿನಲ್ಲಿ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಎಷ್ಟು ಹಣವನ್ನು ಒದಗಿಸಲಾಗಿದೆ; ಮತ್ತು ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ;</td><td>2024-25ನೇ ಸಾಲಿನಲ್ಲಿ ವಿದ್ಯಾರ್ಥಿ ನಿಲಯಗಳ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ರೂ.225.00 ಕೋಟಿಗಳನ್ನು ಒದಗಿಸಲಾಗಿದ್ದು, ಇದುವರೆವಿಗೂ ರೂ.112.50 ಕೋಟಿಗಳು ವೆಚ್ಚವಾಗಿರುತ್ತದೆ.</td></tr>
</table>

| | | |
|---|---|---|
| ಉ) | ಯಾವ ಕಾಲಮಿತಿಯೊಳಗೆ ಬಾಡಿಗೆಯಲ್ಲಿರುವಂತಹ ವಸತಿ ನಿಲಯಗಳನ್ನು ಸ್ವಂತ ಕಟ್ಟಡಗಳಿಗೆ ಸ್ಥಳಾಂತರಿಸಿ ಅನುಕೂಲ ಮಾಡಿಕೊಡಲಾಗುವುದು? | ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ 15 ವಿದ್ಯಾರ್ಥಿ ನಿಲಯಗಳ ಪೈಕಿ 10 ವಿದ್ಯಾರ್ಥಿ ನಿಲಯಗಳಿಗೆ ರೂ.79.08 ಕೋಟಿಗಳ ಅಂದಾಜು ವೆಚ್ಚದಲ್ಲಿ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತವೆ. ಕಾಮಗಾರಿಗಳ ಪೂರ್ಣಗೊಂಡ ಕೂಡಲೇ ಬಾಡಿಗೆ ಕಟ್ಟಡಗಳಲ್ಲಿರುವ ವಿದ್ಯಾರ್ಥಿ ನಿಲಯಗಳನ್ನು ಸ್ವಂತ ಕಟ್ಟಡಗಳಿಗೆ ಸ್ಥಳಾಂತರಿಸಲು ಕ್ರಮವಹಿಸಲಾಗುವುದು.<br><br>ಮುಂದುವರೆದು, 01 ವಿದ್ಯಾರ್ಥಿ ನಿಲಯಕ್ಕೆ ನಿವೇಶನ ಲಭ್ಯವಿದ್ದು, ಅನುದಾನ ಲಭ್ಯತೆಯನ್ನು ಆಧರಿಸಿ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ. ಬಾಕಿ 04 ವಿದ್ಯಾರ್ಥಿ ನಿಲಯಗಳ ಪೈಕಿ 01 ವಿದ್ಯಾರ್ಥಿ ನಿಲಯವು 2021-22ನೇ ಸಾಲಿನಲ್ಲಿ ಹಾಗೂ 03 ವಿದ್ಯಾರ್ಥಿ ನಿಲಯಗಳು 2024-25ನೇ ಸಾಲಿನಲ್ಲಿ ಮಂಜೂರಾಗಿದ್ದು, ಸೂಕ್ತ ನಿವೇಶನಗಳನ್ನು ಪಡೆಯಬೇಕಾಗಿರುತ್ತದೆ. ನಿವೇಶನ ಪಡೆದ ನಂತರ ಅನುದಾನ ಲಭ್ಯತೆಯನ್ನು ಆಧರಿಸಿ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು. |

**ಸಕಇ 883 ಪಕವಿ 2024**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**